ಸದನದಲ್ಲಿ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೧೫

**ಪಟ್ಟಿ – ೧**

# ಕರ್ನಾಟಕ ವಿಧಾನ ಪರಿಷತ್ತು

**ನೂರ ಮೂವತ್ತಮೂರನೇ ಅಧಿವೇಶನ**

**ಮಂಗಳವಾರ, ದಿನಾಂಕ: ೦೭ನೇ ಫೆಬ್ರವರಿ, ೨೦೧೭**

---

**ಸಮೂಹ – II**

೧. ಇಂಧನ ಸಚಿವರು

೨. ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು

೩. ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು

೪. ಕೃಷಿ ಸಚಿವರು

೫. ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು

೬. ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ರಾಜ್ಯ ಸಚಿವರು

---

## SCP/TSP ತೋಟಗಾರಿಕೆ ಉಪಕರಣಗಳನ್ನು ಖರೀದಿಸುವ ಬಗ್ಗೆ

**ಶ್ರೀ ಡಿ.ಎಸ್. ವೀರಯ್ಯ (ವಿಧಾನ ಸಭೆಯಿಂದ ಚುನಾಯಿತರಾದವರು)–**

೧ (೯೦) ಮಾನ್ಯ ಕೃಷಿಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) SCP/TSP ಅಡಿಯಲ್ಲಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಫಲಾನುಭವಿಗಳಿಗೆ ನೀಡುತ್ತಿದ್ದ ಸಹಾಯಧನವನ್ನು ತೋಟಗಾರಿಕೆ ಉಪಕರಣಗಳನ್ನು ಖರೀದಿಸಿದ ನಂತರ ನೀಡಲಾಗುತ್ತಿದೆಯೇ ;

(ಆ) ಇಂತಹ ನಿಯಮದಿಂದಾಗಿ SCP/TSP ಫಲಾನುಭವಿಗಳು ಅವರ ಸ್ವಂತ ಹಣದಿಂದ ಉಪಕರಣಗಳನ್ನು ಖರೀದಿಸಿದ ನಂತರ ಸಹಾಯಧನ ಪಡೆಯಲು ತೊಂದರೆಯಾಗುವುದಿಲ್ಲವೇ ;

(ಇ) ಈ ಹೊಸ ನಿಯಮದಿಂದಾಗಿ SCP/TSP ಹಣ ಇಲಾಖೆಯಲ್ಲಿ ಬಳಕೆ ಆಗದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಹಾಗಿದ್ದಲ್ಲಿ, ೨೦೧೪-೧೫ ಹಾಗೂ ೨೦೧೫-೧೬ನೇ ಸಾಲುಗಳಲ್ಲಿ SCP/ TSP ಅನುದಾನ ಬಳಕೆ ಆಗದೆ ಉಳಿದಿರುವ ಮೊತ್ತವೆಷ್ಟು ;

(ಉ) SCP/TSP ಅಡಿಯಲ್ಲಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಫಲಾನುಭವಿಗಳು ತೋಟಗಾರಿಕೆ ಉಪಕರಣಗಳನ್ನು ಖರೀದಿಸಲು ಅನುಕೂಲ ಆಗುವಂತೆ ಸರಬರಾಜುದಾರರಿಗೆ ನೇರವಾಗಿ ನೀಡುವುದರ ಮುಖಾಂತರ ಈ ಯೋಜನೆ ಜಾರಿಗೊಳಿಸಲು ಇಲಾಖೆಗೆ ಇರುವ ಅಡೆ-ತಡೆಗಳೇನು ?

**ರಾಜ್ಯದ ಟೋಲ್‌ಗಳಲ್ಲಿ ಆಂಬ್ಯುಲನ್ಸ್ ಮತ್ತು ವಿ.ಐ.ಪಿ. ವಾಹನಗಳಿಗೆ ಪ್ರತ್ಯೇಕ ದ್ವಾರ ನಿರ್ಮಿಸುವ ಬಗ್ಗೆ**

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀದರರ ಕ್ಷೇತ್ರ)**

**ಶ್ರೀ ಎಂ. ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)-**

೨ (೪೪+೫೫) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಟೋಲ್ ರಸ್ತೆಗಳ ಸಂಖ್ಯೆ ಎಷ್ಟು ; ಅವು ಯಾವುವು ;

(ಆ) ಇವುಗಳನ್ನು ಯಾವ ಸಂಸ್ಥೆಯುವರು ನಿರ್ವಹಿಸುತ್ತಿದ್ದಾರೆ ; (ಟೋಲ್ ವಾರು ಮಾಹಿತಿ ನೀಡುವುದು)

(ಇ) ರಾಷ್ಟ್ರೀಯ ಹೆದ್ದಾರಿ ೭೫ರ ದೇವಿಹಳ್ಳಿ-ಕದಬಹಳ್ಳಿ (ಬಿಂಡಿಗನವಲೆ ಹೋಬಳಿ) ಮತ್ತು ಶಾಂತಿ ಗ್ರಾಮದ ನಡುವೆ ಬರುವ ಟೋಲ್ ಸೇರಿದಂತೆ ರಾಜ್ಯದ ಎಲ್ಲಾ ಟೋಲ್‌ಗೇಟ್‌ಗಳಲ್ಲಿ, ವಿ.ವಿ.ಐ.ಪಿ. ವಿ.ಐ.ಪಿ ಮತ್ತು

ತುರ್ತು ಆಂಬ್ಯುಲೆನ್ಸ್ ವಾಹನಗಳಿಗೆ ಆಗುವ ತೊಂದರೆಗಳನ್ನು ಪರಿಹಾರ ಮಾಡಲು ಪ್ರತ್ಯೇಕ ಲೇನ್ ನಿರ್ಮಾಣ ಮಾಡಲು ಸರ್ಕಾರದ ವತಿಯಿಂದ ಕ್ರಮ ಕೈಗೊಳ್ಳಲಾಗಿದೆಯೇ ;

(ಈ) ಆಂಬ್ಯುಲೆನ್ಸ್ ಮತ್ತು ವಿ.ಐ.ಪಿ. ವಾಹನಗಳಿಗೆ ಪ್ರತ್ಯೇಕ ದ್ವಾರ ನಿರ್ಮಿಸಲಾಗಿದೆಯೇ ; ನಿರ್ಮಿಸಿದ್ದರೆ, ಎಲ್ಲೆಲ್ಲಿ ನಿರ್ಮಿಸಲಾಗಿದೆ ; ನಿರ್ಮಿಸದಿದ್ದರೆ, ಯಾವಾಗ ನಿರ್ಮಿಸಲಾಗುವುದು ; (ವಿವರವಾದ ಮಾಹಿತಿ ನೀಡುವುದು)

(ಉ) ಆಂಬ್ಯುಲೆನ್ಸ್ ಮತ್ತು ವಿ.ಐ.ಪಿ. ವಾಹನಗಳಿಗೆ ಇಲ್ಲಿಯವರೆಗೆ ಪ್ರತ್ಯೇಕ ದ್ವಾರ ನಿರ್ಮಿಸದೇ ಇರುವ ಸಂಸ್ಥೆಗಳ ಮೇಲೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ ? (ವಿವರವಾದ ಮಾಹಿತಿ ನೀಡುವುದು)

## ಮಾನ್ವಿ ಪಟ್ಟಣಕ್ಕೆ ಕುಡಿಯುವ ನೀರಿನ ಕೊರತೆ ನೀಗಿಸುವ ಬಗ್ಗೆ

**ಶ್ರೀ ಎನ್. ಎಸ್. ಬೋಸ್‌ರಾಜು (ವಿಧಾನ ಸಭೆಯಿಂದ ಚುನಾಯಿತರಾದವರು)–**

೩ (೨೧) ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಯಚೂರು ಜಿಲ್ಲೆಯಲ್ಲಿ ನೂತನವಾಗಿ ಅಸ್ತಿತ್ವಕ್ಕೆ ಬಂದಿರುವ ಪಟ್ಟಣ ಪಂಚಾಯಿತಿಗಳಿಗೆ ಮೂಲಭೂತ ಸೌಲಭ್ಯಗಳನ್ನು ಒದಗಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಆ) ರಾಯಚೂರು ಜಿಲ್ಲೆಯಲ್ಲಿ ಬರುವ ಸಿರವಾರ ಕವಿತಾಳ, ಮಸ್ಕಿ, ಬಳಗಾನೂರು, ಪಟ್ಟಣ ಪಂಚಾಯಿತಿಗಳಲ್ಲಿ ಕುಡಿಯುವ ನೀರಿನ ವ್ಯವಸ್ಥೆಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಇ) ಮಾನ್ವಿ ಪಟ್ಟಣದಲ್ಲಿ ಪ್ರಸ್ತುತ ೫ ದಿನಗಳಿಗೊಮ್ಮೆ ಕುಡಿಯುವ ನೀರು ಸರಬರಾಜು ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಕುಡಿಯುವ ನೀರಿನ ವ್ಯವಸ್ಥೆಯ ಕೊರತೆಯನ್ನು ನೀಗಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಈ) ರಾಯಚೂರು ನಗರಕ್ಕೆ ಕುಡಿಯುವ ನೀರಿನ ೨೪x೭ ಯೋಜನೆ ನಿಗದಿತ ಅವಧಿಯಲ್ಲಿ ಪೂರೈಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ; ಕಾಮಗಾರಿಯನ್ನು ಪೂರೈಸಲು ನಿಗದಿಪಡಿಸಲಾಗಿರುವ ಕಾಲಮಿತಿ ಎಷ್ಟು ?

## ಪಶುಸಂಗೋಪನೆ ಇಲಾಖೆಯ ಯೋಜನೆಗಳ ಬಗ್ಗೆ

**ಶ್ರೀ ಬಸನಗೌಡ ಆರ್. ಪಾಟೀಲ್ (ಯತ್ನಾಳ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)–**

೪ (೧೦) ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪಶುಸಂಗೋಪನೆ ಇಲಾಖೆಯಲ್ಲಿರುವ ಯೋಜನೆಗಳು ಯಾವುವು ; ಸದರಿ ಯೋಜನೆಯಲ್ಲಿ ರಾಜ್ಯದ ಹಾಗೂ ಕೇಂದ್ರದ ಪಾಲೆಷ್ಟು ; (ಯೋಜನಾವಾರು ವಿವರಗಳನ್ನು ಪ್ರತ್ಯೇಕವಾಗಿ ಒದಗಿಸುವುದು)

(ಆ) ಸದರಿ ಯೋಜನೆಗಳನ್ನು ಪಡೆದುಕೊಳ್ಳಲು ಇರುವ ನಿಯಮಗಳೇನು ; (ಸಂಪೂರ್ಣ ವಿವರವನ್ನು ಒದಗಿಸುವುದು)

(ಇ) ೨೦೧೫–೧೬ನೇ ಸಾಲಿನಿಂದ ಈವರೆವಿಗಿನ ಫಲಾನುಭವಿಗಳ ಸಂಖ್ಯೆ ಎಷ್ಟು ? (ಯೋಜನಾವಾರು, ಫಲಾನುಭವಿಗಳ ಹೆಸರು ಸಹಿತ ಜಿಲ್ಲಾವಾರು ಮಾಹಿತಿಯನ್ನು ಒದಗಿಸುವುದು)

## ಹೈದರಾಬಾದ್–ಕರ್ನಾಟಕ ಜಿಲ್ಲೆಯಲ್ಲಿ ಕೃಷಿ ಇಲಾಖೆಯ ಸಿಬ್ಬಂದಿ ನೇಮಕಾತಿ ಬಗ್ಗೆ.

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)–**

೫ (೩೭) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೃಷಿ ಇಲಾಖೆಯಲ್ಲಿ ಹೈದರಾಬಾದ್–ಕರ್ನಾಟಕದ ಯಾವ ಯಾವ ಜಿಲ್ಲೆಗಳಲ್ಲಿ ಹೊರಗುತ್ತಿಗೆ ಆಧಾರದ ಮೇಲೆ ಸಿಬ್ಬಂದಿಗಳನ್ನು ನೇಮಕ ಮಾಡಿಕೊಳ್ಳಲಾಗಿದೆ ;

(ಆ) ನೇರ ನೇಮಕಾತಿ ಮೂಲಕ ನೇಮಕ ಮಾಡಿಕೊಳ್ಳಲಾಗಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು, ಹುದ್ದೆವಾರು ವಿವರ ನೀಡುವುದು)

(ಇ) ನೇಮಕಾತಿ ಆಗಿರುವ ಸಿಬ್ಬಂದಿಗಳಿಗೆ ನೀಡುತ್ತಿರುವ ವೇತನ ಎಷ್ಟು ? (ತಾಲ್ಲೂಕುವಾರು ವಿವರ ನೀಡುವುದು)

## ಶಿರಾಡಿ ಘಾಟ್ ರಸ್ತೆ ಅಭಿವೃದ್ಧಿ ಮಾಡುವ ಕುರಿತು ಮತ್ತು ಹಾಸನ –ಬಿ.ಸಿ. ರೋಡ್ ಚತುಷ್ಪಥ ಕಾಮಗಾರಿ ಕುರಿತು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)–**

೬. (೪೫೫) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಾಸನ–ಸಕಲೇಶಪುರ–ಅಡ್ಡಹೊಳೆ–ಬಿ.ಸಿ.ರೋಡ್ ರಾಷ್ಟ್ರೀಯ ಹೆದ್ದಾರಿ ಅಭಿವೃದ್ಧಿ ಮತ್ತು ಚತುಷ್ಪಥ ಕಾಮಗಾರಿಯ ಯೋಜನೆಗಳೇನು ; (ನೀಲಿ ನಕ್ಷೆ–ಅಂದಾಜು ಮೊತ್ತ–ಗುತ್ತಿಗೆದಾರರ ವಿವರ–ಕಾಮಗಾರಿಯ ಕಾಲಮಿತಿಯ ಸಂಪೂರ್ಣ ವಿವರ ನೀಡುವುದು)

(ಆ) ಅತಿಯಾದ ತಿರುವು, ಅಂಕು–ಡೊಂಕುಗಳನ್ನು ಕಡಿಮೆಗೊಳಿಸಿ, ವಾಹನ ಸಂಚಾರಕ್ಕೆ ಅನುಕೂಲಕರವಾದ ರಸ್ತೆ ನಿರ್ಮಿಸುವ ಕುರಿತು ಸರ್ಕಾರ ಯಾವ ಕ್ರಮ ಕೈಗೊಂಡಿದೆ ; (ವಿವರ ನೀಡುವುದು)

(ಇ) ಶಿರಾಡಿ ಘಾಟ್ ಉಳಿಕೆ ಕಾಮಗಾರಿಯ ಒಟ್ಟು ಯೋಜನಾ ಮೊತ್ತವೆಷ್ಟು ; ಕಾಮಗಾರಿಯ ಗುತ್ತಿಗೆದಾರರು ಯಾರು ; ಕಾಮಗಾರಿ ಯಾವಾಗ ಪ್ರಾರಂಭಗೊಂಡಿದ್ದು, ಯಾವ ಕಾಲಮಿತಿಯೊಳಗೆ ಕಾಮಗಾರಿಯನ್ನು ಮುಕ್ತಾಯಗೊಳಿಸಬೇಕಾಗಿದೆ ;

(ಈ) ಶಿರಾಡಿ ಘಾಟ್ ಉಳಿಕೆ ಕಾಮಗಾರಿ ಆರಂಭವಾಗದಿರುವುದಕ್ಕೆ ಕಾರಣಗಳೇನು ; ಕಾಮಗಾರಿ ಆರಂಭಕ್ಕೆ ಮುಂಚೆ ರದ್ದಾಗಿರುವುದು ನಿಜವೆ ; ಕಾರಣಗಳೇನು ;

(ಉ) ಶಿರಾಡಿ ಘಾಟ್ ಉಳಿಕೆ ಕಾಮಗಾರಿಯನ್ನು ಕೈಗೆತ್ತಿಕೊಳ್ಳಲು ಯಾವಾಗ ಪುನಃ ಟೆಂಡರ್ ಕರೆಯಲಾಗುವುದು ; ಕಾಮಗಾರಿಯನ್ನು ಯಾವ ಕಾಲಮಿತಿಯೊಳಗೆ ಪೂರ್ಣಗೊಳಿಸಲಾಗುವುದು ;

(ಊ) ಶಿರಾಡಿ ಘಾಟ್ ರಸ್ತೆಗಳು ಸಂಪೂರ್ಣ ಹದಗೆಟ್ಟಿದ್ದು, ವಾಹನ ಸಂಚಾರಕ್ಕೆ ಯೋಗ್ಯವಾಗಿಲ್ಲದಿರುವುದನ್ನು ಸರ್ಕಾರ ಗಮನಿಸಿದೆಯೆ ; ಗಮನಿಸಿದ್ದಲ್ಲಿ ಈ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ;

(ಋ) ರಾಜ್ಯ ರಾಜಧಾನಿ–ಕರಾವಳಿ ಬೆಸೆಯುವ ರಸ್ತೆ–ಶಿರಾಡಿ ಘಾಟ್ ರಸ್ತೆಯನ್ನು ತುರ್ತಾಗಿ ಸಂಚಾರಕ್ಕೆ ಯೋಗ್ಯಗೊಳಿಸುವ ಬಗ್ಗೆ ಸರ್ಕಾರ ಯಾವ ಕಾಲಮಿತಿಯಲ್ಲಿ ಯಾವ ಕ್ರಮ ಕೈಗೊಳ್ಳಲಿದೆ ?

## ರಾಜ್ಯ ಹೆದ್ದಾರಿಗಳನ್ನು ರಾಷ್ಟ್ರೀಯ ಹೆದ್ದಾರಿಗಳನ್ನಾಗಿ ಮೇಲ್ದರ್ಜೆಗೇರಿಸುವ ಬಗ್ಗೆ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನ ಸಭೆಯಿಂದ ಚುನಾಯಿತರಾದವರು)–**

೭ (೦೬) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಹಲವಾರು ರಾಜ್ಯ ಹೆದ್ದಾರಿಗಳನ್ನು ರಾಷ್ಟ್ರೀಯ ಹೆದ್ದಾರಿಗಳನ್ನಾಗಿ ಮೇಲ್ದರ್ಜೆಗೇರಿಸಲು ಕೇಂದ್ರ ಸರ್ಕಾರ ಅನುಮೋದನೆ ನೀಡಿರುವುದು ನಿಜವೆ ;

(ಆ) ಹಾಗಿದ್ದಲ್ಲಿ, ಏಪ್ರಿಲ್ ೨೦೦೮ ರಿಂದ ೩೧ನೇ ಡಿಸೆಂಬರ್ ೨೦೧೬ ರವರೆಗೆ ರಾಜ್ಯದ ಎಷ್ಟು ರಾಜ್ಯ ಹೆದ್ದಾರಿಗಳನ್ನು ರಾಷ್ಟ್ರೀಯ ಹೆದ್ದಾರಿಗಳನ್ನಾಗಿ ಮೇಲ್ದರ್ಜೆಗೇರಿಸಲು ಕೇಂದ್ರ ಸರ್ಕಾರ ಅನುಮೋದನೆ ನೀಡಿದೆ ಮತ್ತು ಎಷ್ಟು ಹಣ ಮಂಜೂರು ಮಾಡಿದೆ ? (ಒಟ್ಟು ಕಿ.ಮೀ.ಗಳು ಮತ್ತು ಹಣ ಮಂಜೂರಾತಿಯ ಪೂರ್ಣ ವಿವರಗಳನ್ನು ರಸ್ತೆವಾರು ನೀಡುವುದು)

## ಕೃಷಿ ಹೊಂಡಕ್ಕೆ ಬಲಿಯಾದ ಜನರು–ಜಾನುವಾರುಗಳ ಬಗ್ಗೆ

**ಶ್ರೀ ಟಿ.ಎ. ಶರವಣ (ವಿಧಾನ ಸಭೆಯಿಂದ ಚುನಾಯಿತರಾದವರು)–**

೮ (೯೨) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಎರಡು ವರ್ಷಗಳಲ್ಲಿ ರಾಜ್ಯದಲ್ಲಿ ನಿರ್ವಹಣೆ ನಿರ್ಲಕ್ಷ್ಯದಿಂದ ಕೃಷಿ ಹೊಂಡಕ್ಕೆ ಬಲಿಯಾದ ಜನರು ಮತ್ತು ಜಾನುವಾರುಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಕೃಷಿ ಹೊಂಡ ನಿರ್ಮಾಣವಾದ ನಂತರ ನಿರ್ವಹಣೆ ಮಾಡಲು ಇರುವ ಮಾನದಂಡವೇನು ; ಅದನ್ನು ಎಲ್ಲರೂ ಅನುಸರಿಸದೆ ಇರಲು ಕಾರಣವೇನು ;

(ಇ) ಕೃಷಿ ಹೊಂಡಕ್ಕೆ ಹರಿದು ಬರುವ ಮಳೆ ನೀರು ಭೂಮಿಯಲ್ಲಿ ಇಂಗಿ ಹೋಗದಂತೆ ತಡೆಯಲು ಪಾಲಿಥಿನ್ ಬಳಸುವುದು ; ಈ ರೀತಿಯ ಅನಾಹುತಕ್ಕೆ ಕಾರಣವೇ ;

(ಈ) ಕೃಷಿ ಹೊಂಡ ನಿರ್ವಹಣೆಗೆ ಆಧುನಿಕವಾಗಿ ನೆರಳು ಪರದೆ (ಷೇಡ್ ನೆಟ್ ) ಅಳವಡಿಕೆ ಅಥವಾ ಇತರೆ ವಿಧಾನಗಳಿಂದ ಇಂತಹ ಅಪಘಾತ ತಡೆಯಲು ಸಾಧ್ಯವೆ ;

(ಉ) ಕೃಷಿ ಹೊಂಡದಿಂದ ಈವರೆಗೆ ರಾಜ್ಯದಲ್ಲಿ ಎಷ್ಟು ಅನಾಹುತಗಳು ನಡೆದಿವೆ ಹಾಗೂ ಅನಾಹುತಗಳನ್ನು ತಪ್ಪಿಸಲು ಸರ್ಕಾರ ತೆಗೆದುಕೊಂಡ ಕ್ರಮವೇನು ?

## ರಾಜ್ಯದ ಹೆದ್ದಾರಿಗಳನ್ನು ಮೇಲ್ದರ್ಜೆಗೇರಿಸುವ ಮತ್ತು ಟೋಲ್ ಸಂಗ್ರಹ ಕುರಿತು

**ಶ್ರೀ ವಿ. ಸೋಮಣ್ಣ (ವಿಧಾನ ಸಭೆಯಿಂದ ಚುನಾಯಿತರಾದವರು)–**

೯ (೩೪) ಮಾನ್ಯ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಿಂದೀಚೆಗೆ ರಾಜ್ಯದ ಎಷ್ಟು ಹೆದ್ದಾರಿ ರಸ್ತೆಗಳನ್ನು ಮೇಲ್ದರ್ಜೆಗೇರಿಸಲಾಗಿದೆ ; ಈ ಯೋಜನೆಗೆ ಸರ್ಕಾರ ಮೀಸಲಿಟ್ಟಿದ್ದ ಅನುದಾನವೆಷ್ಟು ; ಹಾಗೂ ಬಳಕೆಯಾದ ಪ್ರಮಾಣದ ಮಾಹಿತಿ ನೀಡುವುದು ; (ಕೇಂದ್ರ ಸರ್ಕಾರದಿಂದ ಪಡೆದ ಅನುದಾನದ ವಿವರ ನೀಡುವುದು)

(ಆ) ರಾಜ್ಯದಲ್ಲಿರುವ ಎಷ್ಟು ಹೆದ್ದಾರಿಗಳಲ್ಲಿ ಟೋಲ್ ಸಂಗ್ರಹವಾಗುತ್ತಿದೆ ; ಪ್ರತಿ ಟೋಲ್‌ಗಳಲ್ಲಿ ದಿನವೊಂದಕ್ಕೆ ಸಂಗ್ರಹವಾಗುತ್ತಿರುವ ಮೊಬಲಗೆಷ್ಟು ; (ಹೆದ್ದಾರಿ ಮತ್ತು ಟೋಲ್‌ಗೇಟ್‌ಗಳ ಹಾಗೂ ಟೋಲ್ ಸಂಗ್ರಹಿಸುತ್ತಿರುವ ಸಂಸ್ಥೆಯ ಹೆಸರಿನೊಂದಿಗೆ ಸಂಪೂರ್ಣ ಮಾಹಿತಿ ನೀಡುವುದು)

(ಇ) ಹಲವಾರು ಟೋಲ್ ಸಂಗ್ರಹ ಸ್ಥಳಗಳಲ್ಲಿ ಗಂಟೆಗಟ್ಟಲೆ ಸಾರ್ವಜನಿಕರನ್ನು ಕಾಯಿಸಿ ಪ್ರಯಾಣಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ ಕೈಗೊಂಡ ಕ್ರಮಗಳೇನು ?

## ವಿದ್ಯುತ್ ದರದ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)–**

೧೦ (೬೮) ಮಾನ್ಯ ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಎಸ್ಕಾಮ್‌ಗಳ ವಿದ್ಯುತ್ ಗ್ರಾಹಕರಿಗೆ ಪ್ರತಿ ಯೂನಿಟ್ ವಿದ್ಯುತ್‌ಗೆ ೧.೪೦ ರೂ. ಹೆಚ್ಚಳ ಮಾಡುವ ಬಗ್ಗೆ ಕರ್ನಾಟಕ ವಿದ್ಯುತ್ ನಿಯಂತ್ರಣ ಆಯೋಗಕ್ಕೆ ( K.E.R.C) ಪ್ರಸ್ತಾವನೆ ಸಲ್ಲಿಸಿರುವುದು ನಿಜವೇ ; (ವಿವರ ನೀಡುವುದು)

(ಆ) ಕಳೆದ ೫ ವರ್ಷಕ್ಕೆ ಹೋಲಿಸಿದರೆ ಎಸ್ಕಾಮ್‌ಗಳು, ಈ ಬಾರಿ ಸಲ್ಲಿಸಿರುವ ಪ್ರಸ್ತಾವನೆ ಅತ್ಯಂತ ದುಬಾರಿಯಾಗಿರುವುದು ನಿಜವಲ್ಲವೆ ;

(ಇ) ಹಾಗಿದ್ದಲ್ಲಿ, ವಿದ್ಯುತ್ ದರ ಏರಿಕೆಯಿಂದಾಗಿ ರೈತರಿಗೆ ಎಲ್ಲಾ ಗ್ರಾಹಕರಿಗೆ ಬೆಲೆ ಏರಿಕೆಯಿಂದ ಸಂಕಷ್ಟವಾಗುವುದಿಲ್ಲವೆ ;

(ಈ) ಸಕಾಲಕ್ಕೆ ವಿದ್ಯುತ್ ಪೂರೈಕೆ ಮಾಡಲು ಸರ್ಕಾರ ರೂಪಿಸಿಕೊಂಡಿರುವ ಯೋಜನೆಗಳಾವುವು ; (ವಿವರ ನೀಡುವುದು)

(ಉ) ಕೈಗೆಟುಕುವ ದರದಲ್ಲಿ ವಿದ್ಯುತ್ ಪೂರೈಕೆ ಮಾಡಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳಾವುವು ? (ವಿವರ ನೀಡುವುದು)

## ಪಶು ವಿಶ್ವವಿದ್ಯಾಲಯಗಳಲ್ಲಿ ಕೈಗೊಂಡಿರುವ ಸಂಶೋಧನೆಗಳ ಕುರಿತು

**ಶ್ರೀ ಕೆ.ಸಿ. ಕೊಂಡಯ್ಯ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)–**

೧೧ (೫೨) ಮಾನ್ಯ ಪಶು ಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪಶು ವಿಶ್ವವಿದ್ಯಾಲಯಗಳಲ್ಲಿ ಕೈಗೊಂಡಿರುವ ಸಂಶೋಧನೆಗಳು ಯಾವುವು ; ಎಷ್ಟು ಜನ ಸಂಶೋಧನಾ ವಿದ್ಯಾರ್ಥಿಗಳು ಕಾರ್ಯನಿರ್ವಹಿಸುತ್ತಿದ್ದಾರೆ ;

(ಆ) ಸಂಶೋಧನೆಗಳಿಗೆ ಅಗತ್ಯವಿರುವ ಅನುದಾನವನ್ನು ಸರ್ಕಾರ ಬಿಡುಗಡೆ ಮಾಡುತ್ತಿದೆಯೇ ;

(ಇ) ಅನುದಾನದ ಲಭ್ಯತೆಯ ಕೊರತೆಯಿಂದಾಗಿ ಸ್ಥಗಿತಗೊಂಡಿರುವ ಸಂಶೋಧನೆಗಳು ಯಾವುವು ;

(ಈ) ಯಾದಗಿರಿಯ ದೂರನಹಳ್ಳಿಯಲ್ಲಿರುವ ಎಮ್ಮೆ ಸಂಶೋಧನೆ ಮತ್ತು ಮಾಹಿತಿ ಕೇಂದ್ರಕ್ಕೆ ನೀಡಲಾಗುತ್ತಿರುವ ಅನುದಾನವೆಷ್ಟು ; ಹೊಸ ಎಮ್ಮೆ ತಳಿಗಳ ಸಂಶೋಧನೆ ಆಗಿದೆಯೇ ?

## ರೋಣ ತಾಲ್ಲೂಕಿನ ಗಜೇಂದ್ರಗಡ ನಗರದಲ್ಲಿ ಪಶು ಆಸ್ಪತ್ರೆ ನಿರ್ಮಿಸುವ ಕುರಿತು

**ಶ್ರೀ ಎಸ್. ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ)–**

೧೨ (೩೬) ಮಾನ್ಯ ಪಶು ಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರೋಣ ತಾಲ್ಲೂಕಿನ ಗಜೇಂದ್ರಗಡದಲ್ಲಿರುವ ಪಶು ಆಸ್ಪತ್ರೆ ಶಿಥಿಲಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸದರಿ ಆಸ್ಪತ್ರೆಗೆ ಮಂಜೂರಾಗಿರುವ ವೈದ್ಯರು ಹಾಗೂ ವೈದ್ಯರೇತರ ಸಿಬ್ಬಂದಿಗಳ ಸಂಖ್ಯೆ ಎಷ್ಟು ; ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ವೈದ್ಯರ ಹಾಗೂ ವೈದ್ಯರೇತರ ಸಿಬ್ಬಂದಿಗಳ ಸಂಖ್ಯೆ ಎಷ್ಟು ;

(ಇ) ನೂತನ ಆಸ್ಪತ್ರೆ ಕಟ್ಟಲು ಜಾಗವನ್ನು ಗುರುತಿಸಲಾಗಿದೆಯೇ ಮತ್ತು ಮಂಜೂರಾಗಿರುವ ಅನುದಾನವೆಷ್ಟು ;

(ಈ) ನೂತನ ಪಶು ಆಸ್ಪತ್ರೆಯ ಕಟ್ಟಡ ನಿರ್ಮಾಣ ಕಾರ್ಯವನ್ನು ಪ್ರಾರಂಭಿಸಲಾಗುವುದು ಯಾವಾಗ ; ಮತ್ತು ಹೆಚ್ಚಿನ ಸಿಬ್ಬಂದಿಯನ್ನು ಯಾವಾಗ ಒದಗಿಸಲಾಗುವುದು ?

## ತೋಟಗಾರಿಕೆ ಇಲಾಖೆಯ ಯೋಜನೆಯ ಸಹಾಯ ಸವಲತ್ತುಗಳ ಬಗ್ಗೆ

**ಶ್ರೀ ಸೋಮಣ್ಣ .ಮ. ಬೇವಿನ ಮರದ (ವಿಧಾನ ಸಭೆಯಿಂದ ಚುನಾಯಿತರಾದವರು)–**

೧೩ (೧೪) ಮಾನ್ಯ ಕೃಷಿಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ತೋಟಗಾರಿಕೆ ಇಲಾಖೆಯ ವಿವಿಧ ಯೋಜನೆಗಳ ಸಹಾಯ–ಸವಲತ್ತುಗಳು ಪ್ರಚಾರದ ಕೊರತೆಯಿಂದಾಗಿ ಗ್ರಾಮೀಣ ಭಾಗದ ರೈತರಿಗೆ ಮಾಹಿತಿ ಲಭ್ಯವಾಗದೆ ಸದರಿ ಸವಲತ್ತುಗಳನ್ನು ಪಡೆಯದಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ರೈತರಿಗೆ ತೋಟಗಾರಿಕಾ ಬೆಳೆಗಳಿಗೆ ಸರ್ಕಾರದಿಂದ ಸಿಗುವ ಸಹಾಯ–ಸವಲತ್ತುಗಳು, ವಿವಿಧ ಯೋಜನೆಗಳು ಹಾಗೂ ಸಹಾಯಧನಗಳು ಯಾವುವು ;

(ಇ) ಕಳೆದ ೩ ವರ್ಷಗಳಲ್ಲಿ ಹಾವೇರಿ ಜಿಲ್ಲೆಗೆ ತೋಟಗಾರಿಕಾ ಇಲಾಖೆಯ ವಿವಿಧ ಯೋಜನೆಗಳಡಿ ಸರ್ಕಾರದಿಂದ ಬಿಡುಗಡೆಯಾದ ಅನುದಾನವೆಷ್ಟು ; (ತಾಲ್ಲೂಕುವಾರು, ವರ್ಷಾವಾರು, ಲೆಕ್ಕ ಶೀರ್ಷಿಕೆವಾರು ವಿವರ ನೀಡುವುದು)

(ಈ) ಹಾವೇರಿ ಜಿಲ್ಲೆಯಲ್ಲಿ ಸಹಾಯಧನ ಹಾಗೂ ವಿವಿಧ ಸವಲತ್ತು ಕೋರಿ ಬಂದ ಅರ್ಜಿಗಳ ಸಂಖ್ಯೆ ಎಷ್ಟು ; ಎಷ್ಟು ಮಂದಿಗೆ ಸವಲತ್ತು ಹಾಗೂ ಸಹಾಯಧನ ನೀಡಲಾಗಿದೆ ; ಬಾಕಿಯಿರುವ ಅರ್ಜಿಗಳೆಷ್ಟು ; (ಯೋಜನೆವಾರು, ಫಲಾನುಭವಿಗಳ ಹೆಸರು ಹಾಗೂ ಲೆಕ್ಕಶೀರ್ಷಿಕೆ ಸಹಿತ ವಿವರ ನೀಡುವುದು)

(ಉ) ಫಲಾನುಭವಿಗಳ ಆಯ್ಕೆಗೆ ಇರುವ ಮಾನದಂಡಗಳೇನು ; ಆಯ್ಕೆ ಸಮಿತಿ ಯಾವುದು ಹಾಗೂ ಯಾವ ಆಧಾರದ ಮೇಲೆ ಆಯ್ಕೆ ಪಟ್ಟಿಯನ್ನು ಅಂತಿಮಗೊಳಿಸಲಾಗುವುದು ?

## ಮಂಡ್ಯ-ಕೆರೆಗೋಡು-ಕೌಡ್ಲೆ ಮಾರ್ಗವಾಗಿ ಯಡಿಯೂರು ರಸ್ತೆ ಕಾಮಗಾರಿ ಬಗ್ಗೆ (ರಾಜ್ಯ ಹೆದ್ದಾರಿ-೮೪)

**ಶ್ರೀ ಕೆ. ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ)-**

೧೪ (೭೮) ಮಾನ್ಯ ಲೋಕೋಪಯೋಗಿ, ಬಂದರು, ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮಂಡ್ಯದಿಂದ ಯಡಿಯೂರುವರೆಗಿನ ರಾಜ್ಯ ಹೆದ್ದಾರಿ-೮೪ರ ಕಾಮಗಾರಿಗೆ ಮಂಜೂರಾಗಿರುವ ಹಣ ಎಷ್ಟು ;

(ಆ) ಈ ಕಾಮಗಾರಿಗೆ ಟೆಂಡರ್ ಆಗಿದೆಯೇ ; ಟೆಂಡರ್ ಪಡೆದಿರುವವರು ಯಾರು ; ಯಾವ ದಿನಾಂಕದಿಂದ ಪಡೆದಿದ್ದಾರೆ ;

(ಇ) ಮಂಡ್ಯ ಭಾಗದಲ್ಲಿ ಕಾಮಗಾರಿಯು ಮಂದಗತಿಯಲ್ಲಿ ನಡೆಯುತ್ತಿರುವುದರಿಂದ ಸಾರ್ವಜನಿಕರ ಸಂಚಾರಕ್ಕೆ ಹಾಗೂ ಜನರ ಆರೋಗ್ಯದ ಮೇಲೆ ಗಂಭೀರ ಪರಿಣಾಮ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಜನರಿಗೆ ತೊಂದರೆಯಾಗದಂತೆ ಕಾಮಗಾರಿ ಮಾಡಲು ಕೈಗೊಂಡ ಕ್ರಮಗಳೇನು ;

(ಉ) ಸದರಿ ಕಾಮಗಾರಿಯನ್ನು ತ್ವರಿತಗತಿಯಲ್ಲಿ ಪೂರ್ಣಗೊಳಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ; ಕಾಮಗಾರಿಯನ್ನು ಯಾವಾಗ ಪೂರ್ಣಗೊಳಿಸಲಾಗುವುದು ?

## ರೈತರಿಗೆ ಬೆಳೆ ನಷ್ಟವಾದಲ್ಲಿ ಪರಿಹಾರ ನೀಡುವ ಬಗ್ಗೆ

**ಶ್ರೀ ಎಂ. ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)-**

೧೫(೫೪) ಮಾನ್ಯ ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ರೈತರು ಹಿಂಗಾರು ಮತ್ತು ಮುಂಗಾರು ಬೆಳೆಗಳಲ್ಲಿ ನಷ್ಟ ಹೊಂದಿದ ಸಮಯದಲ್ಲಿ ನಷ್ಟವನ್ನು ಭರಿಸಿಕೊಡುವ ವಿಮೆ ಕಂಪನಿಗಳು ಯಾವುವು ; (ಮಾಹಿತಿಯನ್ನು ನೀಡುವುದು)

(ಆ) ಸತತವಾಗಿ ಹಿಂಗಾರು ಮತ್ತು ಮುಂಗಾರು ಬೆಳೆಗಳಲ್ಲಿ ವಿಮೆ ಮಾಡಿಸದೇ ನಷ್ಟವಾಗಿರುವ ರೈತರಿಗೆ ಜೀವನೋಪಾಯಕ್ಕಾಗಿ ಸರ್ಕಾರದ ವತಿಯಿಂದ ಪರಿಹಾರ ನೀಡುವ ವ್ಯವಸ್ಥೆ ಮಾಡಲಾಗಿದೆಯೇ ; (ವಿವರ ನೀಡುವುದು)

(ಇ) ರೈತರು ಬೆಳೆ ಬೆಳೆಯುವ ಮೊದಲು ಪಡೆಯುವ ಸಾಲದಲ್ಲಿಯೇ ವಿಮೆ ಮಾಡಿಸಿದ್ದಲ್ಲಿ ಪ್ರಾಕೃತಿಕ ವಿಕೋಪದಿಂದ ಬೆಳೆ ನಷ್ಟವಾದಲ್ಲಿ ವಿಮೆ ಹಣದಿಂದ ಪಡೆದ ಸಾಲಕ್ಕೆ ಸಾಲ ಮರುಹೊಂದಾಣಿಕೆ ಮಾಡುವಂತಹ ಕ್ರಮ ಕೈಗೊಳ್ಳಬಹುದಲ್ಲವೇ ಇದರಿಂದ ರೈತರಿಗೆ ಅನುಕೂಲವಾಗು - ವುದರಿಂದ ಸರ್ಕಾರ ರೈತರಿಗೆ ನೆರವಾಗಬಹುದಾದಂತಹ ಈ ಯೋಜನೆಯನ್ನು ಕೈಗೊಳ್ಳಬಹುದಲ್ಲವೇ ?

**ಶ್ರೀನಿವಾಸ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಮುದ್ರಣಾಲಯ, ವಿಕಾಸಸೌಧ ಘಟಕ, ಬೆಂಗಳೂರು, ಕಾ.ಸೂ. 947 - ಪಿ8 - 1500 ಪ್ರತಿಗಳು